**ದಿನಾಂಕ 07.02.2026 ರಂದು ಸಾಕ್ಷಿದಾರರನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲುಃ– ಶ್ರೀ ಎಸ್.ಪಿ.ಬಿ. 9ನೇ ಪ್ರತಿವಾದಿ ಪರ ವಕೀಲರಿಂದಃ**

ವಾದಿಗಳು ನಮ್ಮ ದಾಯಾದಿಗಳಾಗಿರುತ್ತಾರೆ. ವಾದಿಗಳ ತಂದೆ ಕೆಂಪಯ್ಯನವರಿಗೆ ಮೂರು ಜನ ಮಕ್ಕಳಿರುತ್ತಾರೆ. ನನಗೆ ಪ್ರತಿವಾದಿ 5 ಮತ್ತು 6 ರವರುಗಳು ಸಹ ಸಂಬಂಧಿಕರಾಗಿರುತ್ತಾರೆ. ನಾನು ದಾವಾ 'ಡಿ' ಯಿಂದ 'ಎಫ್' ಆಸ್ತಿಗಳ ದಾಖಲೆಯನ್ನು ನೋಡಿರುವುದಿಲ್ಲ. ವಾದಿ ಹಾಗೂ ಅವರ ತಂದೆಯವರು ದಿನಾಂಕ 22.09.2018 ರಂದು ನೋಂದಾಯಿತ ವಿಭಾಗ ಪತ್ರ ಮಾಡಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ದಾವಾ 'ಎ' ಆಸ್ತಿಯು ಪ್ರತಿವಾದಿ 3 ರವರ ಭಾಗಕ್ಕೆ ಬಂದಿದೆ ಎಂದರೆ ಸರಿಯಲ್ಲ. 3ನೇ ಪ್ರತಿವಾದಿ ತಮಗೆ ಬಂದ ದಾವಾ 'ಎ' ಆಸ್ತಿಯನ್ನು ದಿನಾಂಕ 16.05.2019 ರಂದು ನೋಂದಾಯಿತ ಕ್ರಯಪತ್ರದ ಮೂಲಕ 9ನೇ ಪ್ರತಿವಾದಿಗೆ ಮಾರಾಟ ಮಾಡಿರುತ್ತಾರೆ ಎಂದರೆ ಸರಿ. ವಾದಿ ಮತ್ತು ಪ್ರತಿವಾದಿಗಳ ಕುಟುಂಬದಲ್ಲಿ ವಿಭಾಗ ಆಗಿರುವ ವಿಚಾರ ನನಗೆ ತಿಳಿದಿದ್ದರೂ ವಾದಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ವಾದಿಗಳಿಗೆ ಯಾವುದೇ ರೀತಿಯ ಹಕ್ಕು, ಅಧಿಕಾರ ಇಲ್ಲದೇ ಇದ್ದರೂ ಸದರಿ ವಿಚಾರ ನನಗೆ ತಿಳಿದಿದ್ದರೂ ವಾದಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ.**

( ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಿಂದ ಬೆರಳಚ್ಚು ಪಡಿಸಲಾಯಿತು.)

ಓ ಹೇ ಕೇ ಸ ಇದೆ,

ಒಂದನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾದಂ., ಕೊಳ್ಳೇಗಾಲ